**<u>ಸಾಕ್ಷಿಗೆ ದಿನಾಂಕ 21.03.2024 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀಮತಿ. ಕವಿತಾ ವಕೀಲರಿಂದ:</u>**

1. ನಾನು ಈ ಪ್ರಕರಣದಲ್ಲಿ, ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 10. | ಗಾಯದ ಪ್ರಮಾಣ ಪತ್ರ |
| ನಿ.ಪಿ 11 ರಿಂದ 14. | ಡಿಸ್ಚಾರ್ಜ್ ಸಮರಿಗಳು |
| ನಿ.ಪಿ 15. | 79 ಮೆಡಿಕಲ್ ಬಿಲ್ ಗಳು ಮೊತ್ತ ರೂ.6,55,783/- (ಅವುಗಳನ್ನು ಕ್ರಮವಾಗಿ ಕ್ರಮ ಸಂಖ್ಯೆ 1 ರಿಂದ 53 ಎಂದು ತೋರಿಸಲಾಗಿರುತ್ತದೆ.) |
| ನಿ.ಪಿ 16. | ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.) |

**3.** ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀ ಸವಾಲು:</u> ಎದುರುದಾರರ ಪರ ವಕೀಲರು ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ, ಈ ಕಾರಣದಿದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**<u>ಮರುವಿಚಾರಣೆ ಇಲ್ಲ.</u>**

**(ನನ್ನ ಉಕ್ತ ಲೇಖನದಂತೆ ತೆರದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ
ನ್ಯಾಯಾಧೀಶರು, ಬೆಂಗಳೂರು.**